2

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 24/06/20

# ಶಾಸಕರ ಭವನಕ್ಕೂ ಕೊರೋನಾ, ಕೆಲಸಗಾರನಿಗೆ ಸೋಂಕು

**ಬೆಂಗಳೂರು:** ವಿಧಾನಸೌಧ, ವಿಕಾಸಸೌಧ, ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾ ಬಳಿಕ ಇದೀಗ ಶಾಸಕರ ಭವನಕ್ಕೂ ಕೊರೋನಾ ಕಾಲಿಟ್ಟಿದೆ. ಶಾಸಕರ ಭವನದಲ್ಲಿ ಕಾರು ಸ್ವಚ್ಛಗೊಳಿಸುವ ವ್ಯಕ್ತಿಯಲ್ಲಿ ಕೊರೋನಾ ಸೋಂಕು ಇರುವುದು ದೃಢಪಟ್ಟಿದೆ.



ಶಾಸಕರ ಭವನದಲ್ಲಿ ಶಾಸಕರು, ಸಚಿವರು ಮತ್ತು ಅಧಿಕಾರಿಗಳ ಕಾರು ತೊಳೆಯುವ ವ್ಯಕ್ತಿಗೆ ಕೊರೋನಾ ಪಾಸಿಟಿವ್ ಬಂದಿರುವ ಹಿನ್ನೆಲೆಯಲ್ಲಿ ಶಾಸಕರ ಭವನದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಪ್ರಸ್ತುತ ಸೋಂಕಿತ ವ್ಯಕ್ತಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಶಾಸಕರ ಭವನದಲ್ಲಿ ಸುರಕ್ಷಿತ ಕ್ರಮಗಳನ್ನು ಕೈಗೊಳ್ಳಲಾಗಿದೆ. ಅಲ್ಲಿನ ಸಿಬ್ಬಂದಿಯಲ್ಲಿ ಆತಂಕ ಎದುರಾಗಿದ್ದು, ಸೋಂಕಿತ ವ್ಯಕ್ತಿಯ ಸಂಪರ್ಕಿತರನ್ನು ಕ್ವಾರಂಟೈನ್‌ಗೊಳಪಡಿಸಲು ನಿರ್ಧರಿಸಲಾಗಿದೆ.